ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು

ನೂರ ನಲವತ್ತೊಂದನೆಯ ಅಧಿವೇಶನ

ಸೋಮವಾರ, ದಿನಾಂಕ : 21 ನೇ ಸೆಪ್ಟೆಂಬರ್, 2020

ಬೆಂಗಳೂರು ವಿಶ್ವವಿದ್ಯಾಲಯದ ಸ್ನಾತಕೋತ್ತರ ಕೇಂದ್ರಗಳ ಮೂಲ ಸೌಕರ್ಯಗಳ ಬಗ್ಗೆ

ಶ್ರೀ ಸಿ. ಎಂ.ಲಿಂಗಪ್ಪ(ನಾಮನಿರ್ದೇಶನ ಹೊಂದಿದವರು) -

47 (124) ಮಾನ್ಯ ಉಪ ಮುಖ್ಯಮಂತಿಗಳು ಹಾಗೂ ಉನ್ನತ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ -

(ಅ) ಬೆಂಗಳೂರು ವಿಶ್ವವಿದ್ಯಾಲಯದ ಸ್ನಾತಕೋತ್ತರ ಕೇಂದ್ರಕ್ಕೆ ಸರ್ಕಾರದಿಂದ ಮಂಜೂರಾಗಿರುವ ಅನುದಾನವೆಷ್ಟು;

(ಆ) ಈ ವಿಶ್ವವಿದ್ಯಾಲಯದ ಕಟ್ಟಡ ಮತ್ತು ಮೂಲ ಸೌಕರ್ಯಗಳಿಗೆ ಸರ್ಕಾರದಿಂದ ಮಂಜೂರು ಮಾಡಿರುವ ಅನುದಾನವೆಷ್ಟು; (ವಿವರ ನೀಡುವುದು)

(ಇ) ಸದರಿ ವಿಶ್ವವಿದ್ಯಾಲಯಕ್ಕೆ ಮಂಜೂರಾಗಿರುವ ಕಾರ್ಯನಿರ್ವಹಿಸುತ್ತಿರುವ ಹುದ್ದೆ ಹಾಗೂ ಖಾಲಿ ಇರುವ ಹುದ್ದೆಗಳೆಷ್ಟು;

(ಈ) ಸದರಿ ಖಾಲಿ ಹುದ್ದೆಗಳನ್ನು ತುಂಬಲು ಹಾಗೂ ಮೂಲಭೂತ ಸೌಕರ್ಯ ಒದಗಿಸಲು ಸರ್ಕಾರ ಯಾವುದಾದರೂ ಕ್ರಮ ಕೈಗೊಂಡಿದೆಯೇ?